**ಗದಗ ಬೆಟಗೇರಿ ನಗರದಲ್ಲಿ ಯು.ಡಿ.ಪಿ.ಎಚ್. ಯೋಜನೆ ಕುರಿತು**

369 - ಶ್ರೀ ಡಿ.ಆರ್. ಪಾಟೀಲ್ (ಗದಗ್) : ಮಾನ್ಯ ಉಪ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಗದಗ - ಬೆಟಗೇರಿ ನಗರದಲ್ಲಿ ವಿದ್ಯುತ್ ವಿತರಣೆ ಸುಧಾರಿಸಲು ಅನುಷ್ಠಾನಗೊಂಡಿರುವ ಯು.ಡಿ.ಐ.ಎಸ್. ಯೋಜನೆಯ ಕೆಲಸ ಎಂದು ಆರಂಭವಾಗಿದೆ ಹಾಗೂ ಈ ಯೋಜನೆಯ ಒಟ್ಟು ಅಂದಾಜು ವೆಚ್ಚ ಎಷ್ಟು?*

ಆ) *ಈ ಯೋಜನೆಯು ಅನುಷ್ಠಾನಕ್ಕೆ ನಿಗದಿಗೊಳಿಸಲಾಗಿರುವ ಕಾಲಾವಧಿ ಎಷ್ಟು?*

ಇ) *ಈ ಯೋಜನೆಯು ಯಾವ ಹಂತದಲ್ಲಿದೆ ಹಾಗೂ ಯೋಜನೆಯ ಕೆಲಸ ಎಂದು ಪೂರ್ಣಗೊಳ್ಳುವುದು?*

ಶ್ರೀ ಜೆ.ಹೆಚ್. ಪಟೀಲ್ (ಉಪ ಮುಖ್ಯಮಂತ್ರಿಗಳು) :

ಅ) 1995-96ರಲ್ಲಿ ಆರಂಭಗೊಂಡಿದೆ. ಈ ಯೋಜನೆಯ ಅಂದಾಜು ವೆಚ್ಚ 838 ಲಕ್ಷ ರೂ.

ಆ) ಈ ಯೋಜನೆಯನ್ನು ಅನುಷ್ಠಾನಗೊಳಿಸಲು ನಿಗದಿಪಡಿಸಿರುವ ಕಾಲಾವಾಧಿ 3 ವರ್ಷಗಳು.

ಇ) ಸದರೀ ಯೋಜನೆಯಡಿ ಬೆಟಗೇರಿಯಲ್ಲಿ ಸ್ಥಾಪಿಸಲಾದ 110 :11 ಕೆ.ವಿ. ವಿದ್ಯುತ್ ಉಪಕೇಂದ್ರಕ್ಕೆ ಬೇಕಾಗುವ ಜಮೀನನ್ನು ಸ್ವಾಧೀನಪಡಿಸಿಕೊಳ್ಳಲಾಗಿದ್ದು, ಪ್ರಾರಂಭಿಕ ಸಿವಿಲ್ ಕಾಮಗಾರಿಗಳನ್ನು ಆರಂಭಿಸಲು ಕ್ರಮ ತೆಗೆದುಕೊಳ್ಳಲಾಗುತ್ತಿದೆ. ಅಲ್ಲದೇ ಸದರಿ ವಿದ್ಯುತ್ ಉಪಕೇಂದ್ರದ ನಿರ್ಮಾಣಕ್ಕೆ ಬೇಕಾಗುವ ಸಾಮಗ್ರಿಗಳು ಮತ್ತು ವಿದ್ಯುತ್ ಉಪಕರಣಗಳನ್ನು ಖರೀದಿಸಲು ಮತ್ತು ಒದಗಿಸಲು ಕ್ರಮ ಕೈಗೊಳ್ಳಗಾತ್ತಿದೆ. ಅಲ್ಲದೇ ಮಸಾರಿ ಕೈಗಾರಿಕಾ ಪ್ರದೇಶದಲ್ಲಿ 11 ಕೆ.ವಿ. ಹೊರಾಂಗಣ ಸ್ವಿಚಿಂಗ್‌ಸ್ಟೇಷನ್ ನಿರ್ಮಾಣ ಕಾರ್ಯವನ್ನು ಪ್ರಾರಂಭಿಸಲಾಗುತ್ತಿದೆ. ಈ ಯೋಜನೆಯನ್ನು 1997-98ನೇ ಸಾಲಿನ ಅಂತ್ಯದ ವೇಳೆಗೆ ಪೂರ್ಣಗೊಳಿಸಲು ಉದ್ದೇಶಿಸಿದೆ.

**ವಿಧಾನ ಸಭಾಕ್ಷೇತ್ರಗಳಲ್ಲಿ ರಸ್ತೆ ಡಾಂಬರೀಕರಣ ಕೆಲಸ ಬಗ್ಗೆ**

370 - ಶ್ರೀ ಡಿ.ಆರ್. ಪಾಟೀಲ್ (ಗದಗ್) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *1995-96ನೇ ಸಾಲಿನಲ್ಲಿ ಪ್ರತಿಯೊಂದು ವಿಧಾನ ಸಭಾ ಕ್ಷೇತ್ರದಲ್ಲಿ ಎಷ್ಟು ಕಿಲೋ ಮೀಟರ್ ಉದ್ದದ ರಸ್ತೆ ಡಾಂಬೀಕರಣ ಕೆಲಸ ಮಾಡಲು ಉದ್ದೇಶಿಸಲಾಗಿದೆ ಹಾಗೂ ಈ ರಸ್ತೆ ಡಾಂಬರೀಕರಣ ಕೆಲಸಕ್ಕೆ ತಗಲುವ ಒಟ್ಟು ವೆಚ್ಚ ಎಷ್ಟು?*

ಆ) *ಗದಗ ವಿಧಾನ ಸಭಾ ಕ್ಷೇತ್ರದ ಪರಿಮಿತಿಯಲ್ಲಿ ಎಷ್ಟು ಕಿಲೋಮೀಟರ್ ರಸ್ತೆ ಡಾಂಬರೀಕರಣ ಮಾಡಲಾಗುವುದು, ಹಾಗೂ ಯಾವ ಯಾವ ರಸ್ತೆಗಳನ್ನು ಇದಕ್ಕೆ ಆಯ್ಕೆ ಮಾಡಲಾಗಿದೆ?*

ಶ್ರೀ ಶಿವಾನಂದ ಹೆಚ್. ಕೌಜಲಗಿ (ಲೋಕೋಪಯೋಗಿ ಸಚಿವರು):

ಅ) 1995-96ನೇ ಸಾಲಿನಲ್ಲಿ ಪ್ರತಿಯೊಂದು ವಿಧಾನ ಸಭಾ ಕ್ಷೇತ್ರದಲ್ಲಿ ಸುಮಾರು 4 ರಿಂದ 8 ಕಿ.ಮೀ. ರಸ್ತೆ ಡಾಂಬೀಕರಣ ಕೆಲಸ ಮಾಡಲು ಉದ್ದೇಶಿಸಲಾಗಿದೆ. ಎಲ್ಲಾ ವಿಧಾನ ಸಭಾ ಕ್ಷೇತ್ರಗಳಲ್ಲಿ ಒಟ್ಟು 1200 ಕಿ.ಮೀ. ಮಾಡಲು ಉದ್ದೇಶಿಸಿದೆ.